# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1018 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ)<br>( ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 12.03.2026 |
| ಉತ್ತರಿಸುವ ಸಚಿವರು | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯ ಕೊಡವ ಹೆರಿಟೇಜ್ ಕಾಮಗಾರಿಯು ವಿಳಂಬವಾಗಲು ಕಾರಣವೇನು; | ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ಕೊಡವ ಹೆರಿಟೇಜ್ ಕಾಮಗಾರಿಯನ್ನು 2013-14ನೇ ಸಾಲಿನ ರೂ.268.04 ಲಕ್ಷಗಳ ಅಂದಾಜು ವೆಚ್ಚದಲ್ಲಿ ಸರ್ಕಾರದ ಆದೇಶದನ್ವಯ ಕೈಗೊಳ್ಳಲು ಪ್ರಾರಂಭಿಸಲಾಗಿತ್ತು. ತದನಂತರ, ಸದರಿ ಕಾಮಗಾರಿಯನ್ನು ಸರ್ಕಾರವು ದಿನಾಂಕ :27.05.2020 ರಂದು ರೂ.330.45 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಪರಿಷ್ಕೃತ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ.<br><br>ಈ ಹೆರಿಟೇಜ್ ಕಾಮಗಾರಿಗೆ ಸರ್ಕಾರದ ಆದೇಶ ಸಂಖ್ಯೆ : ಟಿಓಆರ್/84/ಟಿಡಿಪಿ/2020, ದಿನಾಂಕ :27.05.2020 ರನ್ವಯ ಮೀಸಲಿಟ್ಟ ಒಟ್ಟಾರೆ ರೂ.330.45 ಲಕ್ಷಗಳ ಅನುದಾನವನ್ನು ಆರು ಕಂತುಗಳಲ್ಲಿ ಪೂರ್ಣ ಪ್ರಮಾಣದಲ್ಲಿ ಬಿಡುಗಡೆ ಮಾಡಲಾಗಿರುತ್ತದೆ.<br><br>ಅದರಂತೆ, 2 ಸಂಖ್ಯೆಯ ಐನ್ ಮನೆಗಳು ನಿರ್ಮಾಣ (ಅಡಿಗೆಮನೆ, ದೊಡ್ಡ ಹಾಲ್, ಲೈಬ್ರರಿ) ಬಯಲು ರಂಗಮಂದಿರ, ವಾಟರ್ ಟ್ಯಾಂಕ್ ಅಪ್ಪರ್ & ಲೋವರ್ ಡಿಸ್ ಪ್ಲೇ ಭಾಗದ ತಡೆಗೋಡೆ ನಿರ್ಮಾಣ ಇತರ ಭಾಗಗಳಿಗೆ ಸಂಪರ್ಕ ಕಲ್ಪಿಸಲು ಮೆಟ್ಟಿಲು ನಿರ್ಮಾಣ ಹಾಗೂ ಇತ್ಯಾದಿ ಸೌಲಭ್ಯಗಳನ್ನು ಕೈಗೊಂಡಿದ್ದು, ಸದರಿ ಕಾಮಗಾರಿ 2023ರಲ್ಲಿ ಪೂರ್ಣಗೊಂಡಿರುತ್ತದೆ. |
| ಆ) | 2025-26 ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳು ಆಯವ್ಯಯ ಘೋಷಣೆಯಲ್ಲಿ ರಾಜ್ಯದ ಆಯ್ದ 10 ಜಿಲ್ಲೆಗಳಲ್ಲಿನ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುವುದು ಎಂದು ಘೋಷಿಸಲಾಗಿದ್ದು, ಈ ಪೈಕಿ ಕೊಡಗು ಜಿಲ್ಲೆಯ ಕೊಡವ ಹೆರಿಟೇಜ್ ಕೇಂದ್ರವನ್ನು ಅಂದಾಜು ಮೊತ್ತ ರೂ.5.00 ಕೋಟಿಗಳಲ್ಲಿ ಅಭಿವೃದ್ಧಿಪಡಿಸುವ ಪ್ರಸ್ತಾವನೆಯು ಯಾವ ಹಂತದಲ್ಲಿದೆ; | ಕೊಡಗು ಜಿಲ್ಲೆಯ ಕೊಡವ ಹೆರಿಟೇಜ್ ಕೇಂದ್ರವನ್ನು ಅಂದಾಜು ಮೊತ್ತ ರೂ.5.00 ಕೋಟಿಗಳಲ್ಲಿ ಅಭಿವೃದ್ಧಿಪಡಿಸುವ ಪ್ರಸ್ತಾವನೆಗೆ ಸರ್ಕಾರದ ಆದೇಶ ಸಂಖ್ಯೆ: ಟಿಓಆರ್ 190 ಟಿಡಿಟಿ 2025, ದಿನಾಂಕ: 07.03.2026 ರಲ್ಲಿ ಮೆ.ಕೆ.ಟಿ.ಐ.ಎಲ್ ಅನ್ನು ಅನುಷ್ಠಾನ ಸಂಸ್ಥೆಯನ್ನಾಗಿ ನೇಮಿಸಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ |

| | | |
|---|---|---|
| ಇ) | ಈ ಯೋಜನೆಗೆ ಸಂಬಂಧಿಸಿದಂತೆ ರೂ.5.00 ಕೋಟಿಗಳಿಗೆ ಮೀರದಂತೆ ವಿಸ್ತೃತ ಯೋಜನಾ ವರದಿಯನ್ನು (ಡಿ.ಪಿ.ಆರ್) ಸಿದ್ಧಪಡಿಸಲು ಯಾವ ದಿನಾಂಕದಂದು, ಯಾರಿಗೆ ಜವಾಬ್ದಾರಿ ನೀಡಲಾಗಿದೆ; ಕೋರಿಕೆಯಂತೆ ಡಿ.ಪಿ.ಆರ್ ಸಿದ್ಧಪಡಿಸಿ ಸರ್ಕಾರಕ್ಕೆ ನೀಡಲಾಗಿದೆಯೇ; ನೀಡಿದ್ದಲ್ಲಿ ಅಂದಾಜು ಎಷ್ಟು ಮೊತ್ತದ ಡಿ.ಪಿ.ಆರ್ ಸಿದ್ಧಪಡಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು). | ಈ ಯೋಜನೆಗೆ ಸಂಬಂಧಿಸಿದಂತೆ ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಿ ಜಿಲ್ಲಾಧಿಕಾರಿಗಳ ಅನುಮೋದನೆಯೊಂದಿಗೆ ಸಲ್ಲಿಸಲು ಉಪ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಕೊಡಗು ಜಿಲ್ಲೆ ಇವರಿಗೆ ದಿನಾಂಕ:09.10.2025 ಮತ್ತು 10.12.2025ರ ಪತ್ರಗಳಲ್ಲಿ ತಿಳಿಸಲಾಗಿತ್ತು. ದಿನಾಂಕ:23.02.2026 ರಂದು ಉಪ ನಿರ್ದೇಶಕರು ಕೊಡಗು ಇವರು ರೂ.5.00 ಕೋಟಿ ಮೊತ್ತದ ಡಿ.ಪಿ.ಆರ್ ಮತ್ತು ಅಂದಾಜು ಪಟ್ಟಿಯನ್ನು ಸಲ್ಲಿಸಿರುತ್ತಾರೆ. |
| ಈ) | ಡಿ.ಪಿ.ಆರ್ ಸಲ್ಲಿಕೆಯ ನಂತರ ಕೈಗೊಂಡಿರುವ ಕ್ರಮಗಳೇನು; ಟೆಂಡರ್ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದೆಯೇ; (ಮಾಹಿತಿ ನೀಡುವುದು) | ವಿಸ್ತೃತ ಯೋಜನಾ ವರದಿ ಮತ್ತು ಅಂದಾಜು ಪಟ್ಟಿಯನ್ನು ಆಡಳಿತಾತ್ಮಕ ಅನುಮೋದನೆಗಾಗಿ ಸರ್ಕಾರಕ್ಕೆ ದಿನಾಂಕ:25.02.2026 ರಂದು ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಸರ್ಕಾರದ ಆದೇಶ ಸಂಖ್ಯೆ: ಟಿಓಆರ್ 190 ಟಿಡಿಓ 2025, ದಿನಾಂಕ:07.03.2026 ರಂದು ಮ.ಕೆ.ಟಿ.ಐ.ಎಲ್ ಅನ್ನು ಅನುಷ್ಠಾನ ಸಂಸ್ಥೆಯನ್ನಾಗಿ ನೇಮಿಸಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಅನುಷ್ಠಾನ ಸಂಸ್ಥೆಯಿಂದ ನಿಯಮಾನುಸಾರ ಟೆಂಡರ್ ಆಹ್ವಾನಿಸಿ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ. |
| ಉ) | ಯಾವ ಕಾಲಮಿತಿಯೊಳಗೆ ಕೊಡವ ಹೆರಿಟೇಜ್ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು? (ಸಂಪೂರ್ಣ ವಿವರ ನೀಡಿವುದು) | |

**TOR 40 TDV 2026**

(ಎಚ್.ಕೆ. ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು.